# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 37 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. |
| ಉತ್ತರಿಸುವ ದಿನಾಂಕ | : | 04-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ (ಸಂರಕ್ಷಣೆ) ಕಾಯ್ದೆ 1980 ಜಾರಿಗೆ ಬರುವ ಪೂರ್ವದಲ್ಲಿ ರಾಜ್ಯ ಸರ್ಕಾರದ ಸಕ್ಷಮ ಪ್ರಾಧಿಕಾರಗಳು ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭೂ ಮಂಜೂರಾತಿ ಕಾಯ್ದೆ ಮತ್ತು ನಿಯಮಗಳು ಹಾಗೂ ಇತರೆ ಕಾನೂನಾತ್ಮಕ ನಿಯಮಗಳಡಿಯಲ್ಲಿ ಅನೇಕ ಪ್ರಕರಣಗಳಲ್ಲಿ ಅರಣ್ಯ ಭೂಮಿಯನ್ನು ಮಂಜೂರು ಮಾಡಿವೆಯೇ; | ಅರಣ್ಯ (ಸಂರಕ್ಷಣೆ) ಕಾಯ್ದೆ 1980 ಜಾರಿಗೆ ಬರುವ ಪೂರ್ವದಲ್ಲಿ ರಾಜ್ಯ ಸರ್ಕಾರದ ಸಕ್ಷಮ ಪ್ರಾಧಿಕಾರಗಳು ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭೂ ಮಂಜೂರಾತಿ ಕಾಯ್ದೆ ಮತ್ತು ನಿಯಮಗಳು ಹಾಗೂ ಇತರೆ ಕಾನೂನಾತ್ಮಕ ನಿಯಮಗಳಡಿಯಲ್ಲಿ ವಿವಿಧ ಯೋಜನೆಗಳಿಗೆ ಹಲವಾರು ಪ್ರಕರಣಗಳಲ್ಲಿ ಅರಣ್ಯ ಭೂಮಿಯನ್ನು ಮಂಜೂರು ಮಾಡಿರುತ್ತದೆ. |
| ಆ) | ಮಂಜೂರು ಮಾಡಿದಲ್ಲಿ ಆ ವೇಳೆಯಲ್ಲಿ ರಾಜ್ಯದಲ್ಲಿ ಚಾಲ್ತಿಯಲ್ಲಿದ್ದಂತಹ ಅರಣ್ಯ ಕಾಯ್ದೆಗಳನ್ವಯ ಇಂತಹ ಮಂಜೂರಾದ ಎಲ್ಲಾ ಅರಣ್ಯ ಭೂಮಿಯನ್ನು "Denotification" ಮಾಡದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ) | ಬಂದಿದ್ದಲ್ಲಿ ಇಂದಿಗೂ ಇಂತಹ ಮಂಜೂರಾತಿಗಳು ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ಮುಂದುವರೆಸಿಕೊಂಡು ಬರಲಾಗುತ್ತಿದ್ದು ಈ ಸಮಸ್ಯೆ ಪರಿಹರಿಸಲು ಸರ್ಕಾರ ಇದುವರೆಗೆ ಕೈಗೊಂಡ ಕ್ರಮಗಳೇನು; | ಸದರಿ ಡಿ-ರಿಸರ್ವ್/ಡಿ-ನೋಟಿಫೈ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯದ ಮಾರ್ಗಸೂಚಿಯ ಅರಣ್ಯ (ಸಂರಕ್ಷಣಾ) ನಿಯಮ 2003, ಅಧ್ಯಾಯ-1 ಕಂಡಿಕೆ-1.13 ರಲ್ಲಿ ಸೂಚಿಸಿರುವಂತೆ, ದಿನಾಂಕ:25.10.1980ರ ಪೂರ್ವದಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದಿರುವ ಯೋಜನೆಗಳಿಗೆ ರಾಜ್ಯ ಸರ್ಕಾರವು ಯಾವುದೇ ಯೋಜನೆಗೆ ಅರಣ್ಯ ಪ್ರದೇಶವನ್ನು ಡಿ-ರಿಸರ್ವ್/ಡಿ-ನೋಟಿಫೈ ಮಾಡಲು ನಿರ್ದಿಷ್ಟ ಆದೇಶವನ್ನು ಹೊರಡಿಸದಿದ್ದಲ್ಲಿ, ಅಂತಹ |

| | | |
|---|---|---|
| | | ಪ್ರಕರಣಗಳಿಗೆ ಅರಣ್ಯ (ಸಂರಕ್ಷಣಾ) ಕಾಯ್ದೆ–1980 ರನ್ವಯ ಕೇಂದ್ರ ಸರ್ಕಾರದ ಪೂರ್ವಾನುಮತಿಯು ಅಗತ್ಯವಿರುತ್ತದೆ.<br><br>ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದ IA No.16, WP No. 337/1995, ದಿನಾಂಕ:09.02.2004ರ ಆದೇಶದ ಹಿನ್ನೆಲೆಯಲ್ಲಿ ಅರಣ್ಯ ಭೂಮಿಯನ್ನು ಡಿ–ರಿಸರ್ವ್ /ಡಿ–ನೋಟಿಫೈ ಮಾಡಲು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅನುಮತಿ ಪಡೆಯಬೇಕಿರುತ್ತದೆ.<br><br>ಈ ಹಿನ್ನೆಲೆಯಲ್ಲಿ, ಅರಣ್ಯ ಭೂಮಿಯನ್ನು ಡಿ–ರಿಸರ್ವ್/ಡಿ–ನೋಟಿಫೈ ಮಾಡಲು ಹಲವು ಪ್ರಕರಣಗಳನ್ನು ಮೇಲೆ ತಿಳಿಸಿರುವಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅನುಮಾತಿಗಾಗಿ IA ಸಲ್ಲಿಸಲಾಗಿದೆ. |
| **ಈ)** | ಸದರಿ ಈ ಎಲ್ಲಾ ಅರ್ಹ ಅರಣ್ಯ ಭೂ ಮಂಜೂರಾತಿ ಪ್ರಕರಣಗಳಲ್ಲಿ ಸರ್ಕಾರದ ನಿಲುವೇನು? | ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಈಗಾಗಲೇ IA ಸಲ್ಲಿಸಲಾದ ಪ್ರಕರಣಗಳಿಗೆ ಬರುವ ಆದೇಶದನುಸಾರ ಉಳಿದ ಪ್ರಕರಣಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಎಫ್‌ಇಇ 66 ಎಫ್‌ಜಿಎಲ್ 2023**

(signature)

**(ಈಶ್ವರ ಬಿ ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು